ಆಶ್ರಯ ಮನೆಗಳ ನಿರ್ಮಾಣ

811 (1078) ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಹಾಗೂ ಬರಪೀಡಿತ ಪ್ರದೇಶವಾದ ಮುಳಬಾಗಿಲು ತಾಲ್ಲೂಕಿಗೆ 2007–08ರಲ್ಲಿ ಮಂಜೂರಾಗಿರುವ ಆಶ್ರಯ ಮನೆಗಳು ಎಷ್ಟು; ಗ್ರಾಮವಾರು ವಿವರ ನೀಡುವುದು;

ಆ) 2008–09ನೇ ಸಾಲಿನಲ್ಲಿ ಎಷ್ಟು ಆಶ್ರಯ ಮನೆಗಳನ್ನು ನೀಡಲು ತೀರ್ಮಾನಿಸಲಾಗಿದೆ; ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು) :

ಅ) 2007–08ನೇ ಸಾಲಿನಲ್ಲಿ ಸರ್ಕಾರವು ಆಶ್ರಯ ಯೋಜನೆಯಡಿ ಗುರಿಯನ್ನು ನಿಗದಿಪಡಿಸಿರುವುದಿಲ್ಲ. ಹಾಗಾಗಿ ಯಾವುದೇ ಮನೆಗಳು ಸದರಿ ಯೋಜನೆಯಡಿ ಮಂಜೂರಾಗಿರುವುದಿಲ್ಲ.

ಆ) 2008–09ನೇ ಸಾಲಿನಲ್ಲಿ 1550 ಆಶ್ರಯ ಮನೆಗಳನ್ನು ಮಂಜೂರು ಮಾಡಲಾಗಿದೆ. ಈ ಮನೆಗಳ ಪೈಕಿ 1540 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಅದರಲ್ಲಿ 1107 ಮನೆಗಳು ಪೂರ್ಣಗೊಂಡಿದ್ದು, 335 ಮನೆಗಳ ನಿರ್ಮಾಣ ಪ್ರಗತಿಯಲ್ಲಿರುತ್ತದೆ.

811 (1078) Sri. Amaresh (Mulabagilu) : Minister for Housing,

a) How many Ashraya houses have been sanctioned in 2007-08 to the backward and famine affected Taluka of Mulabagilu;

b) How many houses are proposed to be sanctioned during 2008-09 series; what are the steps taken to sanction;

Sri. V. Somanna (Minister for Housing) :

a) No target has been issued by Government under Ashraya scheme for the year 2007-08. Therefore no houses are sanctioned to Mulabagilu Taluka for the year 2007-08 under Ashraya scheme.

b) 1550 Ashraya houses are sanctioned for the year 2008-09. Out of this 1540 beneficiaries have been selected, 1107 houses completed and 335 houses are under progress.

ವಿಜಾಪುರದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ

817 (565) ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ) : ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಕೇಂದ್ರವಾಗಿರುವ ಬಿಜಾಪುರದಲ್ಲಿ ನಗರ ಸಾರಿಗೆ ಬಸ್‌ಗಳಿಗೆ ಪ್ರತ್ಯೇಕ ಬಸ್ ನಿಲ್ದಾಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅಲ್ಲದೇ ನಗರವು ಐತಿಹಾಸಿಕ ಹಿನ್ನಲೆಯುಳ್ಳ ಪ್ರವಾಸಿ ತಾಣವಾಗಿದ್ದು, ಪ್ರತಿದಿನ ದೇಶೀಯ ಹಾಗೂ ವಿದೇಶಿ ಪ್ರವಾಸಿಗರು ಬರುತ್ತಿರುವುದನ್ನು ಗಮನಿಸಿದೆಯೇ;

ಇ) ಈಗ ಇರುವ ಕೇಂದ್ರ ಬಸ್ ನಿಲ್ದಾಣದಲ್ಲಿ ಬಸ್‌ಗಳಿಗೆ ಸ್ಥಳಾವಕಾಶವಿಲ್ಲದೇ ಸಂಚಾರಕ್ಕೆ ಮತ್ತು ಪ್ರಯಾಣಿಕರಿಗೆ ತೊಂದರೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

ಈ) ಹಾಗಿದ್ದರೆ, ಬಿಜಾಪುರದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆಯನ್ನು ಸರ್ಕಾರ ಯೋಜಿಸಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು ಅದಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು) :

ಅ) ಹೌದು.

ಆ) ಹೌದು.

ಇ) ಈ ಹಿಂದೆ ವಿಜಾಪುರ ನಗರದಲ್ಲಿ ಶಿಥಿಲಾವಸ್ಥೆಯಲ್ಲಿದ್ದ ಹಳೆಯ ಬಸ್ ನಿಲ್ದಾಣ ಹಾಗೂ ಅದಕ್ಕೆ ಹೊಂದಿಕೊಂಡ ಬಸ್ ಘಟಕವನ್ನು ಒಡೆದು ಹಾಕಿ, 7 ಎಕರೆ ನಿವೇಶನದಲ್ಲಿ ಸುಸಜ್ಜಿತವಾದ ನೂತನ ಬಸ್ ನಿಲ್ದಾಣ ನಿರ್ಮಿಸಲಾಗಿರುತ್ತದೆ. ಪ್ರಸ್ತುತ ಬಸ್ ನಿಲ್ದಾಣದಲ್ಲಿ ಬಸ್‌ಗಳ